# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 11/ಸಭೆ/ಪಿಆರ್/ /2021-22

ದಿನಾಂಕ : 17/01/2022

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ಕುವೆಂಪುನಗರಕ್ಕೆ ಸಂಬಂಧಿಸಿದಂತೆ ವಾರ್ಡ್ ನಂ 11 ಕುವೆಂಪುನಗರ ವಾರ್ಡ್ ಕಛೇರಿಯಲ್ಲಿ ದಿನಾಂಕ 17/01/2022 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಕೈಗೊಂಡ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದ ಅಧಿಕಾರಿ /ನೌಕರರು**

1. ಶ್ರೀ ಪ್ರಸನ್ನ ವೆಂಕಟೇಶ್, ನೋಡಲ್ ಅಧಿಕಾರಿ
2. ಶ್ರೀ ಸೋಮಶೇಖರ್ ಜಿ.ಎಲ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಶ್ರೀ ರೇಣುಕಾ ಪ್ರಸಾದ್, ಡಿ.ಎಂ, ಬಿಡಬ್ಲ್ಯೂಎಸ್ಎಸ್ಬಿ
4. ಶ್ರೀ ಕೇಶವ ಪಾಣಿ, ಆರೋಗ್ಯಾಧಿಕಾರಿಗಳು
5. ಶ್ರೀ ಗೋಪಿ, ಕಂದಾಯ ವಸೂಲಿಗಾರರು
6. ಶ್ರೀ ಭಾರ್ಗವ್, ಹಿರಿಯ ಆರೋಗ್ಯ ಪರಿವೀಕ್ಷಕರು
7. ಶ್ರೀಮತಿ ಕಾಂತಮಣಿ, ಕಿರಿಯ ಆರೋಗ್ಯ ಪರಿವೀಕ್ಷಕರು

**ಹಾಜರಿದ್ದ ಸದಸ್ಯರು/ ಸಾರ್ವಜನಿಕರು**

1. ಶ್ರೀ ಹೆಚ್. ಮೋಹನ್, ಸಿಂಗಾಪುರ
2. ಶ್ರೀ ವಿನಯ್‌ಕುಮಾರ್ ಎ.ಎಸ್, ಪ್ರಕೃತಿ ಲೇಔಟ್
3. ಶ್ರೀ ಆಂತೋಣಿ ಕೆ, ಪ್ರಕೃತಿ ಲೇಔಟ್
4. ಶ್ರೀ ಮಾರಪ್ಪ, ಗಣೇಶ ಲೇಔಟ್

**ಶ್ರೀ ಪ್ರಸನ್ನ ವೆಂಕಟೇಶ್, ನೋಡೆಲ್ ಅಧಿಕಾರಿ:-** ಸಭೆಗೆ ಹಾಜರಿದ್ದ ಅಧಿಕಾರಿಗಳಿಗೆ ಸ್ವಾಗತವನ್ನು ಕೋರಿದರು. ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ಕಾರ್ಯದರ್ಶಿಗೆ ತಿಳಿಸಿದರು.

ಬಾಲಾಜಿ ಲೇಔಟ್ ವ್ಯಾಪ್ತಿಯಲ್ಲಿ ಬರುವ ಖಾಲಿ ನಿವೇಶನಗಳ ಮಾಲೀಕರು ಸ್ವಚ್ಛಗೊಳಿಸದೆ ಇರುವುದರಿಂದ ನಿವೇಶನಗಳಲ್ಲಿ ಗಿಡಗಂಟೆಗಳು ಬೆಳೆದು ಅಕ್ಕಪಕ್ಕದ ನಿವಾಸಿಗಳಿಗೆ ತೊಂದರೆಯಾಗುತ್ತಿರುವುದಾಗಿ ತಿಳಿಸಿರುತ್ತಾರೆ.

**ಉತ್ತರ :** ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ ಸಭೆಯಲ್ಲಿ ಹಾಜರಾಗಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸದರಿ ಬಡಾವಣೆ ವ್ಯಾಪ್ತಿಯಲ್ಲಿ ಬರುವ ನಿವೇಶನಗಳ ಮಾಲೀಕರ ಮಾಹಿತಿಯನ್ನು ಸಂಗ್ರಹಿಸಿ ನೋಟೀಸ್ ಜಾರಿ ಮಾಡಲು ತಿಳಿಸಿದರು.

ಏರ್‌ಫೋರ್ಸ್ ಕಾಂಪೌಂಡ್ ಹತ್ತಿರ ಬ್ಲಾಕ್‌ಸ್ಪಾಟ್ ನಿರ್ಮಾಣವಾಗಿದ್ದು, ಸರಿಪಡಿಸಲು ಕೋರಿದರು.

**ಉತ್ತರ:-** ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲು ಕಾರ್ಯದರ್ಶಿ ರವರಿಗೆ ತಿಳಿಸಿದರು.

ಸಿಂಗಾಪುರ ಬಡಾವಣೆ ವ್ಯಾಪ್ತಿಯಲ್ಲಿ ಬರುವ ರಸ್ತೆಗಳು ಹಾಳಾಗಿರುವುದರಿಂದ ಹೊಸದಾಗಿ ನಿರ್ಮಿಸಲು ತಿಳಿಸಿದರು.

ಉತ್ತರ : ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು ಮಾತನಾಡುತ್ತಾ ಈಗಾಗಲೇ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಅಂದಾಜು ಪಟ್ಟಿ ತಯಾರಿಸಿ ಅನುಮೋದನೆಗೆ ಸಲ್ಲಿಸಿದ್ದು, ಅನುಮೋದನೆಯ ನಂತರ ಕಾಮಗಾರಿ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಗಣೇಶ ಬಡಾವಣೆ ವ್ಯಾಪ್ತಿಯಲ್ಲಿ ಬರುವ ಉದ್ಯಾನವನದ Pathway ಗಳು ಕೆಲವು ಕಡೆ ಕುಸಿಯುತ್ತಿದ್ದು, ಉದ್ಯಾನವನದಲ್ಲಿ ವಾಯುವಿಹಾರಗಳಿಗೆ ತೊಂದರೆಯಾಗುತ್ತಿರುವುದರಿಂದ ದುರಸ್ಥಿಪಡಿಸಲು ತಿಳಿಸಿದರು.

ಉತ್ತರ: ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ ಸಂಬಂಧ ಪಟ್ಟವರಿಗೆ ಕ್ರಮ ಕೈಗೊಳ್ಳಲು ತಿಳಿಸಿದರು.

ಲಕ್ಕಪ್ಪ ಬಡಾವಣೆ ವ್ಯಾಪ್ತಿಯಲ್ಲಿ ಸಂಜೆ ಹಾಗೂ ಬೆಳಿಗ್ಗಿನ ಸಮಯದಲ್ಲಿ ಮರದ ಕೆಳಗೆ ಕೆಲ ಕಿಡಿಗೇಡಿಗಳು ವಾಹನದಲ್ಲಿ ಬಂದು ಧೂಮಪಾನ ಹಾಗೂ ಮದ್ಯಪಾನ ಮಾಡುತ್ತಿರುವುದರಿಂದ ಅಲ್ಲಿನ ಸ್ಥಳೀಯ ನಿವಾಸಿಗಳಿಗೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಪೋಲೀಸ್ ಇಲಾಖೆಯವರು ದೂರು ನೀಡಿದರೂ ಸಹ ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ತಿಳಿಸಿದರು.

ಉತ್ತರ : ನೋಡೆಲ್ ಅಧಿಕಾರಿಗಳು ಪೋಲೀಸ್ ಇಲಾಖೆಯವರಿಗೆ ಕ್ರಮ ಕೈಗೊಳ್ಳಲು ತಿಳಿಸಿದರು.

ಗಣೇಶ ಬಡಾವಣೆ ವ್ಯಾಪ್ತಿಯಲ್ಲಿ ಕಾವೇರಿ ನೀರು ಸರಿಯಾಗಿ ಪೂರೈಕೆಯಾಗದೆ ಇರುವುದರಿಂದ ಬಡಾವಣೆಯ ನಿವಾಸಿಗಳಿಗೆ ತೊಂದರೆ ಉಂಟಾಗುತ್ತಿರುವುದಾಗಿ ದೂರಿದರು.

ಉತ್ತರ: ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲು ತಿಳಿಸಿದರು.

ಗಣೇಶ ಬಡಾವಣೆ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿರುವುದರಿಂದ ಸ್ಥಳೀಯರಿಗೆ ತೊಂದರೆಯಾಗುತ್ತಿರುವುದಾಗಿ ತಿಳಿಸಿದರು.

ಉತ್ತರ : ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ ಸಂಬಂಧ ಪಟ್ಟವರಿಗೆ ಕ್ರಮ ಕೈಗೊಳ್ಳಲು ತಿಳಿಸಿದರು.

ನೋಡೆಲ್ ಅಧಿಕಾರಿಗಳು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ನಂ 11, ಕುವೆಂಪುನಗರ

ನೋಡೆಲ್ ಅಧಿಕಾರಿ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.